## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ವೆಂಕಟೇಶ್, ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ಶ್ರೀ ಗಿರೀಶ್, ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಮತ್ತು ಶ್ರೀ ಬಿ.ಎಂ. ಕುಮಾರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕಂಪ್ಲಾಪುರ ಗ್ರಾಮ ಪಂಚಾಯಿತಿ, ಪಿರಿಯಾಪಟ್ಟಣ ತಾಲ್ಲೂಕು, ಮೈಸೂರು ಜಿಲ್ಲೆ ರವರ ವಿರುದ್ಧ ಲೋಕಾಯುಕ್ತ ವಿಚಾರಣೆ- ಅಂತಿಮ ಆದೇಶ ಹೊರಡಿಸುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 19 ಜಿಪಿಎಸ್ 2016, ದಿನಾಂಕ:01.02.2016.
2. ಅಪರ ನಿಬಂಧಕರು ವಿಚಾರಣೆಗಳು-13, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತ ರವರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: UPLOK-2/DE/40/2016/ARE-13/ ದಿನಾಂಕ: 15.03.2021.
3. ಮಾನ್ಯ ಉಪಲೋಕಾಯುಕ್ತ, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: UPLOK-2/DE/40/2016/ARE-13/ ದಿನಾಂಕ: 18.03.2021.

**ಪ್ರಸ್ತಾವನೆ :**

ಮೇಲೆ ಓದಲಾದ (1) ರ ಸರ್ಕಾರದ ಆದೇಶದಲ್ಲಿ ಶ್ರೀ ವೆಂಕಟೇಶ್, ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ಶ್ರೀ ಗಿರೀಶ್, ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಮತ್ತು ಶ್ರೀ ಬಿ.ಎಂ. ಕುಮಾರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕಂಪ್ಲಾಪುರ ಗ್ರಾಮ ಪಂಚಾಯಿತಿ, ಪಿರಿಯಾಪಟ್ಟಣ ತಾಲ್ಲೂಕು, ಮೈಸೂರು ಜಿಲ್ಲೆ ಇವರುಗಳ ವಿರುದ್ಧದ ಆರೋಪದ ಬಗ್ಗೆ ಇಲಾಖಾ ವಿಚಾರಣೆ ನಡೆಸಲು "ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957" ರ ನಿಯಮ 14-A ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು.

**ದೋಷಾರೋಪಣೆ:**- ಮೈಸೂರು ಜಿಲ್ಲೆ, ಪಿರಿಯಾಪಟ್ಟಣ ತಾಲ್ಲೂಕು, ಕಂಪ್ಲಾಪುರ ಗ್ರಾಮದ ಶ್ರೀ ಕೆ.ಎನ್. ಸೋಮಶೇಖರಪ್ಪ ಬಿನ್ ನಂಜುಂಡಪ್ಪ ಇವರು ದಿನಾಂಕ:09.04.2009 ರಂದು ಲೋಕಾಯುಕ್ತಕ್ಕೆ ಸಲ್ಲಿಸಿದ ದೂರಿನಲ್ಲಿ ಕಂಪ್ಲಾಪುರ ಗ್ರಾಮದಲ್ಲಿ ಅವರ ಸಹೋದರ ಶ್ರೀ ಕೆ.ಎನ್. ಮಲ್ಲಪ್ಪ ಎನ್ನುವವರು ನಿವೇಶನ ಸಂಖ್ಯೆ:91 ಮತ್ತು 94 ಅನ್ನು 1971 ನೇ ಇಸವಿಯಲ್ಲಿ ಖರೀದಿಸಿದ್ದು, ಅವರ ಒಪ್ಪಿಗೆಯ ಮೇರೆಗೆ ಸದರಿ ನಿವೇಶನಗಳ ಖಾತಾಗಳನ್ನು ಪಿರ್ಯಾದುದಾರರ ಹೆಸರಿಗೆ ವರ್ಗಾಯಿಸಲಾಗಿತ್ತೆಂದು, ಈ ಬಗ್ಗೆ ಗ್ರಾಮ ಪಂಚಾಯಿತಿಯ ದಾಖಲೆಗಳಲ್ಲಿ ಪಿರ್ಯಾದುದಾರರ ಹೆಸರಿಗೆ ವರ್ಗಾಯಿಸಲಾಗಿತ್ತೆಂದು, ಈ ಬಗ್ಗೆ ಗ್ರಾಮ ಪಂಚಾಯಿತಿಯ ದಾಖಲೆಗಳಲ್ಲಿ ತಮ್ಮನ್ನು ಖಾತೆದಾರ ಎಂದು 1980 ರವರೆಗೆ ದಾಖಲಾಗಿದ್ದು, ನಂತರ ತಮ್ಮ ಹೆಸರನ್ನು ಕೈಬಿಡಲಾಗಿದೆಯೆಂದೂ, ಈ ಬಗ್ಗೆ ಸಂಬಂಧಪಟ್ಟವರಿಗೆ ದಿನಾಂಕ:12.02.2007 ರಂದು ಅರ್ಜಿ ಸಲ್ಲಿಸಿದ್ದು, ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಯವರು ಅಂದಿನ ಕಾರ್ಯದರ್ಶಿ ಶ್ರೀ ವೆಂಕಟೇಶ್ ರವರಿಗೆ ನಿರ್ದೇಶನ ನೀಡಿದ್ದರೂ ಸಹ ಸುಮಾರು ಒಂದುವರೆ ವರ್ಷ ಕಳೆದರೂ ಯಾವುದೇ ಕ್ರಮ ಜರುಗಿಸಿರುವುದಿಲ್ಲವೆಂದೂ ಹಾಗೂ ಅವರು ವರ್ಗಾವಣೆ ಆದ ನಂತರ ಕರ್ತವ್ಯ ನಿರ್ವಹಿಸಿದ ಕಾರ್ಯದರ್ಶಿ/ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳೂ ಸಹ ಯಾವುದೇ ಕ್ರಮವಹಿಸಿರುವುದಿಲ್ಲವೆಂದೂ ಆಪಾದಿಸಿದ್ದು ಈ ಬಗ್ಗೆ ಲೋಕಾಯುಕ್ತ ಸಂಸ್ಥೆಯಿಂದ ನಡೆಸಿದ ತನಿಖೆಯ ಅನುಸಾರ ಕಂಪ್ಲಾಪುರ ಗ್ರಾಮ



Scanned with CamScanner

ಪಂಚಾಯಿತಿಯಲ್ಲಿ ಕಾರ್ಯದರ್ಶಿಗಳಾಗಿ ಈ ಮೊದಲು ಕರ್ತವ್ಯ ನಿರ್ವಹಿಸಿದ ಶ್ರೀ ವೆಂಕಟೇಶ್ ಮತ್ತು ಗಿರೀಶ್ ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿರುವ ಶ್ರೀ ಬಿ.ಎಂ.ಕುಮಾರ್, ಇವರುಗಳು ಕರ್ತವ್ಯ ಲೋಪ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿರುತ್ತದೆ.

ಸದರಿ ಆರೋಪದ ಬಗ್ಗೆ ಅಪರ ನಿಬಂಧಕರು ವಿಚಾರಣೆಗಳು-13, ಕರ್ನಾಟಕ ಲೋಕಾಯುಕ್ತ, ಇವರು ಇಲಾಖಾ ವಿಚಾರಣೆ ನಡೆಸಿ, ಆಪಾದಿತ ನೌಕರರುಗಳ ವಿರುದ್ಧದ ಆರೋಪಗಳು ಸಾಬೀತಾಗಿಲ್ಲದಿರುವುದಾಗಿ, ಮೇಲೆ ಓದಲಾದ (2) ರಲ್ಲಿ ವರದಿ ಸಲ್ಲಿಸಿರುತ್ತಾರೆ.

ಸದರಿ ವರದಿಯನ್ವಯ ಮಾನ್ಯ ಉಪಲೋಕಾಯುಕ್ತ, ಮೇಲೆ ಓದಲಾದ (3) ರಲ್ಲಿ ಸರ್ಕಾರಕ್ಕೆ ಶಿಫಾರಸ್ಸನ್ನು ಸಲ್ಲಿಸಿದ್ದು, ಶ್ರೀ ವೆಂಕಟೇಶ್, ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ಶ್ರೀ ಗಿರೀಶ್, ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಮತ್ತು ಶ್ರೀ ಬಿ.ಎಂ. ಕುಮಾರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕಂಪ್ಲಾಪುರ ಗ್ರಾಮ ಪಂಚಾಯಿತಿ, ಪಿರಿಯಾಪಟ್ಟಣ ತಾಲ್ಲೂಕು, ಮೈಸೂರು ಇವರುಗಳ ವಿರುದ್ಧದ ಆರೋಪಗಳು ಸಾಬೀತಾಗದಿರುವ ಹಿನ್ನೆಲೆಯಲ್ಲಿ ಸದರಿಯವರನ್ನು ಆರೋಪದಿಂದ ಮುಕ್ತಗೊಳಿಸಿರುವುದಾಗಿ ಶಿಫಾರಸ್ಸು ಸಲ್ಲಿಸಿರುತ್ತಾರೆ.

ಸರ್ಕಾರವು ಅಪರ ನಿಬಂಧಕರು-13, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ, ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸು ಹಾಗೂ ದಾಖಲೆಗಳು ಮತ್ತು ಸಾಕ್ಷ್ಯಾಧಾರಗಳನ್ನು ಕೂಲಂಕಷವಾಗಿ ಪರಿಶೀಲಿಸಿದ್ದು, ಮಾನ್ಯ ಉಪಲೋಕಾಯುಕ್ತ ಶಿಫಾರಸ್ಸನ್ನು ಅಂಗೀಕರಿಸಿ, ಶ್ರೀ ವೆಂಕಟೇಶ್, ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ಶ್ರೀ ಗಿರೀಶ್, ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಮತ್ತು ಶ್ರೀ ಬಿ.ಎಂ. ಕುಮಾರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕಂಪ್ಲಾಪುರ ಗ್ರಾಮ ಪಂಚಾಯಿತಿ, ಪಿರಿಯಾಪಟ್ಟಣ ತಾಲ್ಲೂಕು, ಮೈಸೂರು ಇವರುಗಳನ್ನು ಆರೋಪಮುಕ್ತರನ್ನಾಗಿಸಲು ನಿರ್ಣಯಿಸಿ, ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 43 ಗ್ರಾಪಂಕಾ 2021,**
**ಬೆಂಗಳೂರು, ದಿನಾಂಕ:17.05.2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ವೆಂಕಟೇಶ್, ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ಶ್ರೀ ಗಿರೀಶ್, ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಮತ್ತು ಶ್ರೀ ಬಿ.ಎಂ. ಕುಮಾರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕಂಪ್ಲಾಪುರ ಗ್ರಾಮ ಪಂಚಾಯಿತಿ, ಪಿರಿಯಾಪಟ್ಟಣ ತಾಲ್ಲೂಕು, ಮೈಸೂರು ಇವರುಗಳ ವಿರುದ್ಧದ ಆರೋಪವು ಸಾಬೀತಾಗದಿರುವ ಹಿನ್ನೆಲೆಯಲ್ಲಿ ಸದರಿಯವರನ್ನು ಆರೋಪಮುಕ್ತಗೊಳಿಸಿ, ಸರ್ಕಾರವು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

B. Naveenkumar 17/05/21.
(ಬಿ.ನವೀನ್‌ಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ(ಜಿ.ಪಂ).

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತ ರವರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಅಪರ ನಿಬಂಧಕರು, ವಿಚಾರಣೆಗಳು-13, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.

...3

Scanned with CamScanner

4. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು ಜಿಲ್ಲೆ.
6. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಪಿರಿಯಾಪಟ್ಟಣ, ಮೈಸೂರು ಜಿಲ್ಲೆ.
7. ಶ್ರೀ ವೆಂಕಟೇಶ್, ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ಕಂಪ್ಲಾಪುರ ಗ್ರಾಮ ಪಂಚಾಯಿತಿ, ಪಿರಿಯಾಪಟ್ಟಣ ತಾಲ್ಲೂಕು, ಮೈಸೂರು ಜಿಲ್ಲೆ.
8. ಶ್ರೀ ಗಿರೀಶ್, ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ಕಂಪ್ಲಾಪುರ ಗ್ರಾಮ ಪಂಚಾಯಿತಿ, ಪಿರಿಯಾಪಟ್ಟಣ ತಾಲ್ಲೂಕು, ಮೈಸೂರು ಜಿಲ್ಲೆ.
9. ಶ್ರೀ ಬಿ.ಎಂ. ಕುಮಾರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕಂಪ್ಲಾಪುರ ಗ್ರಾಮ ಪಂಚಾಯಿತಿ, ಪಿರಿಯಾಪಟ್ಟಣ ತಾಲ್ಲೂಕು, ಮೈಸೂರು ಜಿಲ್ಲೆ.
10. ಗಣಕ ಕೋಶ.
11. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

Scanned with CamScanner